116

7

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ ರವರ ನಿಯಮ 72ರಡಿ ಪ್ರಸ್ತಾಪಿಸಿರುವ ಸೂಚನೆಗೆ ಸರ್ಕಾರದ ಹೇಳಿಕೆ.**

## ಸೂಚನೆ

ಕರ್ನಾಟಕದಲ್ಲಿ ಕೃಷಿ ಚಟುವಟಿಕೆಗೆ ಸಂಬಂಧಿಸಿದ ಪರಿಕರಗಳ ಮಾರಾಟ ಮತ್ತು ಉತ್ಪಾದನೆಯಲ್ಲಿ ದೇಶದಲ್ಲಿಯೇ ನಂ-1 ಸ್ಥಾನ ಪಡೆದಿರುವ ಮತ್ತು ಅತಿ ಶ್ರೀಮಂತ ತಾಲೂಕು ಆಗಿರುವ ಸಿಂಧನೂರು ನಗರ ಅತ್ಯಂತ ವೇಗವಾಗಿ ಬೆಳೆಯುತ್ತಿದ್ದು ಜಿಲ್ಲಾ ಕೇಂದ್ರ ರಾಯಚೂರಿನಿಂದ ಸುಮಾರು 90 ಕಿಲೋ ಮಿಟರ್ ದೂರವಿರುತ್ತದೆ ಹಾಗೂ ತಾಲ್ಲೂಕು ಕೇಂದ್ರದಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳು ಇರುತ್ತದೆ. ಸಿಂಧನೂರು ಜಿಲ್ಲಾ ಕೇಂದ್ರವಾಗಲು ಎಲ್ಲಾ ಅರ್ಹತೆ ಹೊಂದಿರುವ ಕಾರಣ ಸಿಂಧನೂರನ್ನು ಜಿಲ್ಲಾ ಕೇಂದ್ರ ಸ್ಥಾನವನ್ನಾಗಿಸಲು ಸರ್ಕಾರ ಸಮಿತಿ ರಚಿಸಬೇಕೆಂದು ಸರ್ಕಾರದ ಗಮನ ಸೆಳೆಯ ಬಯಸುತ್ತೇನೆ.

## ಹೇಳಿಕೆ

ರಾಯಚೂರಿನಿಂದ ಸಿಂಧನೂರು 90.ಕಿ.ಮೀ. ದೂರದಲಿದ್ದು, ಜಿಲ್ಲಾ ನ್ಯಾಯಾಲಯ ಮತ್ತು ಕಾರ್ಯನಿರ್ವಾಹಕ ಅಭಿಯಂತರರು ನೀರಾವರಿ ಇಲಾಖೆ ಹೊರತು ಪಡಿಸಿ ಯಾವುದೇ ಜಿಲ್ಲಾ ಮಟ್ಟದ ಕಛೇರಿಗಳು ಸಿಂಧನೂರು ತಾಲ್ಲೂಕಿನಲ್ಲಿ ಇರುವುದಿಲ್ಲ. ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕನ್ನು ನೂತನ ಜಿಲ್ಲಾ ಕೇಂದ್ರವನ್ನಾಗಿ ಸೃಜಿಸುವ ಸಂಬಂಧ ಕೋರಿಕೆಗಳು ಸ್ವೀಕೃತವಾಗಿರುತ್ತವೆ. ಸದರಿ ಕೋರಿಕೆಗಳನ್ನು ಪರಿಗಣಿಸಲು ಸೂಕ್ತವಾಗಿದ್ದಲ್ಲಿ ಸರ್ಕಾರಕ್ಕೆ ವಿವರವಾದ ಪ್ರಸ್ತಾವನೆ ಸಲ್ಲಿಸುವಂತೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಇವರಿಗೆ ಪತ್ರ ಬರೆಯಲಾಗಿದ್ದು, ಸದರಿಯವರಿಂದ ಯಾವುದೇ ವರದಿ / ಪ್ರಸ್ತಾವನೆ ಸ್ವೀಕೃತಗೊಂಡಿರುವುದಿಲ್ಲ.

ಹೊಸದಾಗಿ ಜಿಲ್ಲೆಗಳನ್ನು ರಚಿಸಲು ನಿರ್ದಿಷ್ಟ ಮಾನದಂಡಗಳನ್ನು ರೂಪಿಸಿರುವುದಿಲ್ಲ. ಯಾವುದೇ ಒಂದು ಪ್ರದೇಶ/ತಾಲ್ಲೂಕನ್ನು ಜಿಲ್ಲೆಯನ್ನಾಗಿ ರಚಿಸುವ ಸಂದರ್ಭದಲ್ಲಿ ಅಲ್ಲಿನ ಭೌಗೋಳಿಕ ಹಿನ್ನೆಲೆ, ಜನಸಂಖ್ಯೆ, ಹಿಂದುಳಿದಿರುವಿಕೆ, ಹೊಸ ಜಿಲ್ಲೆಯ ರಚನೆಯಿಂದಾಗುವ ಅನುಕೂಲ, ಸಾರ್ವಜನಿಕ ಆಶೋತ್ತರಗಳಿಗೆ ಸ್ಪಂದನೆ, ತಾಲ್ಲೂಕು ಕೇಂದ್ರ ಮತ್ತು ಜಿಲ್ಲಾ ಕೇಂದ್ರಗಳಿಗಿರುವ ದೂರ ಸೇರಿದಂತೆ ಸಾರ್ವಜನಿಕ ಹಿತಾಸಕ್ತಿ ಮತ್ತು ಆಡಳಿತಾತ್ಮಕ ಅಂಶಗಳನ್ನು ಪರಾಮರ್ಶಿಸಲಾಗುತ್ತದೆ.

ಇದರ ಜೊತೆಗೆ, ನೂತನ ಜಿಲ್ಲೆಗಳನ್ನು ರಚಿಸುವ ವಿಷಯವು ಸರ್ಕಾರದ ಸಾಮಾನ್ಯ ನೀತಿಗೆ ಸಂಬಂಧಿಸಿದ್ದಾಗಿದೆ. ನೂತನ ಜಿಲ್ಲೆಯನ್ನಾಗಿ ರಚಿಸಬೇಕಾದರೆ ಭೌಗೋಳಿಕ ಮತ್ತು ಆಡಳಿತಾತ್ಮಕ ಅಗತ್ಯತೆಗಳ ಜೊತೆಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸಹ ಅವಲಂಬಿಸಿದ್ದು, ಸಂಪನ್ಮೂಲಗಳ ಕ್ರೋಢೀಕರಣ ಮತ್ತು ಹಣಕಾಸಿನ ಇತಿಮಿತಿಗಳನ್ನು ಒಳಗೊಂಡಿರುತ್ತದೆ. ಸರ್ಕಾರವು ಪ್ರಸ್ತುತ ಹೊಸ ಜಿಲ್ಲೆಗಳ ರಚನೆಗೆ ಸಂಬಂಧಿಸಿದಂತೆ ಯಾವುದೇ ಸಮಿತಿ ರಚಿಸಿರುವುದಿಲ್ಲ ಹಾಗೂ ಯಾವುದೇ ತಾತ್ವಿಕ ನಿರ್ಣಯ ಕೈಗೊಂಡಿರುವುದಿಲ್ಲ.

**ಸಂಖ್ಯೆ: ಕಂಇ 94 ಎಲ್‌ಆರ್‌ಡಿ 2024**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು